ಅಸಲು ದಾವೆ ನಂಃ 410/2023 ಪಿ .ಡಬ್ಲ್ಯೂಃ 1– ಗಂಗವ್ವ ಕೋಂ ಶೇಖರಗೌಡ ಮರಿಯಪ್ಪಗೌಡ್ರ ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 21/07/2026 ರಂದು ಪ್ರಮಾಣೀಕರಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಗಳ ಪರ ವಕೀಲರಾದ ಶ್ರೀ PKU ರವರಿಂದಃ**

ನಾನು ಮತ್ತು ನನ್ನ ಮಕ್ಕಳು ಖಾಯಂ ಆಗಿ ಮೆಣಸಗಿ ಗ್ರಾಮದಲ್ಲಿ ವಾಸವಾಗಿರುತ್ತೇವೆ ಎಂದರೆ ಸರಿ. ನನ್ನ ಮಕ್ಕಳು ಗಾಡಿ ಚಾಲಕರಾಗಿರುತ್ತಾರೆ. ನನ್ನ ಮಕ್ಕಳು ಗದಗನಲ್ಲಿ ಚಾಲಕರಾಗಿ ಕೆಲಸ ಮಾಡುತ್ತಿದ್ದಾರೆ. ನನ್ನ ಮಕ್ಕಳು ಗದಗನಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ನಾನು ಮತ್ತು ನನ್ನ ಮಕ್ಕಳು ಖಾಯಂ ಆಗಿ ಮೆಣಸಗಿ ಗ್ರಾಮದಲ್ಲಿಯೇ ವಾಸವಾಗಿದ್ದರೂ ಸಹ ನನ್ನ ಮಕ್ಕಳು ಗದಗನಲ್ಲಿ ಕೆಲಸ ಮಾಡಿಕೊಂಡು ಅಲ್ಲಿಯೇ ವಾಸವಾಗಿರುತ್ತಾರೆ ಎಂದು ಉದ್ದೇಶಪೂರ್ವಕವಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ನನ್ನ ಮಕ್ಕಳು 2023 ರಲ್ಲಿ ಯಾವುದೇ ಪರ ಸ್ಥಳಕ್ಕೆ ಹೋಗಿರುವುದಿಲ್ಲ ಎಂದರೆ ಸರಿ. ನಮ್ಮ ಜಮೀನುಗಳನ್ನು ನನ್ನ ಮಕ್ಕಳೇ ಉಳುಮೆ ಮಾಡುತ್ತಾರೆ ಎಂದರೆ ಸರಿ. ಈ ದಾವೆಯಲ್ಲಿ ನಿಮ್ಮ ಮಕ್ಕಳನ್ನು ಸಾಕ್ಷಿ ಮಾಡಿಸುತ್ತೀರಾ ಎಂದು ಕೇಳಲಾದ ಪ್ರಶ್ನೆಗೆ ಸಾಕ್ಷಿಯು ಮಾಡಿಸುತ್ತೇನೆ ಎಂದು ನುಡಿದಿರುತ್ತಾರೆ. ನನ್ನ ವಾದಪತ್ರದಲ್ಲಿ ಸರ್ವೆ ನಂ.213 ಕ್ಕೆ ಸಂಬಂಧಿಸಿದಂತೆ ಪಾಲು ವಾಟ್ನಿ ಪತ್ರ ಆಗಿರುತ್ತದೆ ಎಂದು ಹೇಳಲಾಗಿರುವುದಕ್ಕೆ ಸಂಬಂಧಿಸಿದಂತೆ ಪಾಲುವಾಟ್ನಿ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದೀರಾ ಎಂದು ಕೇಳಲಾದ ಪ್ರಶ್ನೆಗೆ ಸಾಕ್ಷಿಯು ಪಾಲುವಾಟ್ನಿಯ ಬಗ್ಗೆ ನನಗೆ ಗೊತ್ತಿಲ್ಲ, ನನ್ನ ಮಕ್ಕಳಿಗೆ ಗೊತ್ತು ಎಂದು ನುಡಿದಿರುತ್ತಾರೆ. ಸರ್ವೆ ನಂ.213/1,213/2, 213/10 ರ ಮೂಲ ಮಾಲೀಕರು ಯಾರು ಎಂದು ನನಗೆ ಗೊತ್ತಿಲ್ಲ. ಚಲವಾದಿಯವರಿಗೆ ಮಾರಾಟ ಮಾಡಿರುವ ಆಸ್ತಿಯ ಸರ್ವೆ ನಂಬರ ನನಗೆ ಹೇಳಲು ಬರುವುದಿಲ್ಲ. ಚಲವಾದಿಯವರು ಯಾವಾಗ ಪಾಲು ವಿಭಾಗ ಮಾಡಿಕೊಂಡಿರುತ್ತಾರೆ ಎಂದು ಮತ್ತು ಸದರಿ ವಾಟ್ನಿ ಪತ್ರವನ್ನು ನೋಡಿದ್ದೀರಾ ಎಂದು ಕೇಳಲಾದ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿದಿರುತ್ತಾರೆ.

**ಮುಂದುವರೆದ ಪಾಟೀ ಸವಾಲುಃ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಅದೆ.

**(ವಿಜಯಕುಮಾರ ಎನ್ )**

ಹೆಚ್ಚುವರಿ ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ

ನ್ಯಾಯಾಧೀಶರು ರೋಣ.